ಮೌರ್ಯ ವಾಣಿ

Mourya Vani

Kannada Daily

ಕನ್ನಡ ದಿನ ಪತ್ರಿಕೆ

ಸಂಪಾದಕರು: ನಿಂಗಪ್ಪ ನಾಗಪ್ಪ ಗಾಳೆಮ್ಮನವರ

Editor : NINGAPPA NAGAPPA GALEMMANAVAR

Email: mouryavani@gmail.com

Ph: 9449287359

ಸತ್ಯದ ಧ್ವನಿ, ನ್ಯಾಯದ ಹಾದಿ, ಜನಪರ

VOLUME-06 | ISSUE:81 | KARKAN/2021/81194 | HAVERI | 27-11-2026 | FRIDAY | PAGE: 04 | PRICE: 2.00

ಸಂಪುಟ:06 | ಸಂಚಿಕೆ:81 | KARKAN/2021/81194 | ಹಾವೇರಿ | 27–11–2026 | ಶುಕ್ರವಾರ | ಪುಟ–4 | ಬೆಲೆ ರೂ.2.00

ಭಕ್ತ ಶ್ರೇಷ್ಠ ಶ್ರೀ ಕನಕದಾಸರ ಜಯಂತ್ಯೋತ್ಸವ ಇಂದು

ಮೌರ್ಯವಾಣಿ ವಾರ್ತೆ

ಹಾವೇರಿ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶ್ರೀ ಕಾನಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಸಹಯೋಗದಲ್ಲಿ ಭಕ್ತ ಶ್ರೇಷ್ಠ ಶ್ರೀ ಕನಕದಾಸರ ಜಯಂತ್ಯೋತ್ಸವ ಸಮಾರಂಭ ನ.27 ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಕಾನಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದಲ್ಲಿ ಜರುಗಲಿದೆ.

ನಿರಂಜನಾನಂದಪುರಿ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದು, ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ಉದ್ಘಾಟನೆ ನೆರವೇರಿಸಲಿದ್ದಾರೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣಾ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಹಾಗೂ ಶಿಕ್ಷಣ ಸಚಿವರಾದ ಪ್ರಹ್ಲಾದ ಜೋಶಿ, ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್, ಸಕ್ಕರೆ ಮತ್ತು ಜವಳಿ ಸಚಿವರು ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ರುದ್ರಪ್ಪ ಲಮಾಣಿ ಅವರ ಘನ ಉಪಸ್ಥಿತರಿರುವರು.

ಮಾಜಿ ಮುಖ್ಯಮಂತ್ರಿಗಳು ಹಾಗೂ ಲೋಕಸಭಾ ಸದಸ್ಯರಾದ ಬಸವರಾಜ ಎಸ್.ಬೊಮ್ಮಾಯಿ ಅವರು ಗೌರವ ಉಪಸ್ಥಿತರಿರುವರು.

ಬ್ಯಾಡಗಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹುಬ್ಬಳ್ಳಿ ವಿದ್ಯುಕ್ ಸರಬರಾಜು ಕಂಪನಿ ನಿಯಮಿತ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್ ಖಾದ್ರಿ, ಶಾಸಕರು ಹಾಗೂ ಕರ್ನಾಟಕ ಗೃಹ ಮಂಡಳ ಅಧ್ಯಕ್ಷ ಶ್ರೀನಿವಾಸ ಮಾನೆ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಎಚ್.ಎಂ.ರೇವಣ್ಣ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಸೋಮಣ್ಣ ಬೇವಿನಮರದ, ಶಾಸಕರಾದ ಯು.ಬಿ.ಬಣಕಾರ, ಪ್ರಕಾಶ ಕೋಳಿವಾಡ, ಯಾಸೀರ ಅಹ್ಮದ್‌ಖಾನ್ ಪಠಾಣ, ವಿಧಾನ ಪರಿಷತ್ ಶಾಸಕರಾದ ಬಸವರಾಜ ಹೊರಟ್ಟಿ, ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಹನುಮಂತಪ್ಪ ಮರಗಡಿ, ತಾಲೂಕು ಅಧ್ಯಕ್ಷ ಶಂಭನಗೌಡ ಆರ್.ಪಾಟೀಲ ಅವರು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಕಾನಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಧರ್ಮದರ್ಶಿಗಳು ಹಾಗೂ ಆಡಳಿತಾಧಿಕಾರಿ ಎಸ್.ಎಫ್.ಎನ್.ಗಾಜಿಗೌಡ, ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾಧ್ಯಕ್ಷ ನಾಗರಾಜ ಆನವೇರಿ ಅವರು ಪಾಲ್ಗೊಳ್ಳಲಿದ್ದಾರೆ.

ಬೆಂಗಳೂರಿನ ಸಾಹಿತಿ ಡಾ.ಮಂಜಪ್ಪ ಅವರು ಉಪನ್ಯಾಸಕರಾಗಿ ಭಾಗವಹಿಸಲಿದ್ದಾರೆ.

ಸಂವಿಧಾನ ಆಶಯಗಳನ್ನು ಅರಿತು ಪಾಲಿಸುವುದು ಪ್ರತಿ ಪ್ರಜೆಯ ಕರ್ತವ್ಯ: ಅಪರ ಜಿಲ್ಲಾಧಿಕಾರಿ ಡಾ.ನಾಗರಾಜ ಎಲ್.ಅಭಿಮತ



ಮೌರ್ಯವಾಣಿ ವಾರ್ತೆ

ಹಾವೇರಿ: ಸಂವಿಧಾನವು ದೇಶದ ಪ್ರತಿಯೊಬ್ಬ ಪ್ರಜೆಯ ಹಕ್ಕು, ಸ್ವಾತಂತ್ರ್ಯ, ಸಮಾನತೆ ಹಾಗೂ ಗೌರವಯುತ ಬದುಕಿಗೆ ಆಧಾರ ವಾಗಿದ್ದು, ಸಂವಿಧಾನದ ಆಶಯ ಗಳನ್ನು ಅರಿತು ಪಾಲಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ ವಾಗಿದೆ ಎಂದು ಅಪರ ಜಿಲ್ಲಾಧಿ ಕಾರಿ ನಾಗರಾಜ್ ಎಲ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಒಕ್ಕೂಟ ಹಾಗೂ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ 'ಸಂವಿಧಾನ ದಿನಾಚರಣೆ 2026' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತದ ಸಂವಿಧಾನವು ದೇಶದ ಆತ್ಮವಾಗಿದ್ದು, ಸಂವಿಧಾನದ ಪೀಠಿಕೆಯು ಅದರ ಹೃದಯ ಮತ್ತು ಆತ್ಮವಾಗಿದೆ. ಸಂವಿಧಾನದ ಪೀಠಿಕೆಯು ಆಶಯಗಳನ್ನು ಅರಿತುಕೊಳ್ಳುವುದರಿಂದ ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಹಕ್ಕು, ನ್ಯಾಯ, ಸಮಾನತೆ ಮತ್ತು ಸ್ವಾತಂತ್ರ್ಯದ ಮಹತ್ವವನ್ನು ತಿಳಿದುಕೊಳ್ಳಲು ಸಾಧ್ಯವಾಗುತ್ತದೆ. ಸಂವಿಧಾನವು ದೇಶದ 140 ಕೋಟಿ ಜನರಿಗೆ ನೆಮ್ಮದಿಯ ಜೀವನ ನಡೆಸಲು, ಅಭಿವ್ಯಕ್ತಿ ಸ್ವಾತಂತ್ರ್ಯ ಹೊಂದಲು ಹಾಗೂ ಮೇಲು ಕೀಳು ಎಂಬ ಭೇದವಿಲ್ಲದೆ ಸಮಾನತೆಯಿಂದ ಬದುಕಲು ಅವಕಾಶ ಕಲ್ಪಿಸಿದೆ ಎಂದರು.

ಸಂವಿಧಾನವು ನಾಗರಿಕರಿಗೆ ಮೂಲಭೂತ ಹಕ್ಕುಗಳನ್ನು ನೀಡುವುದರ ಜೊತೆಗೆ ಮೂಲಭೂತ ಕರ್ತವ್ಯಗಳನ್ನೂ ನಿರ್ವಹಿಸುವಂತೆ ತಿಳಿಸುತ್ತದೆ. ಜಾತಿ, ಧರ್ಮ ಹಾಗೂ ಇತರ ಯಾವುದೇ ಆಧಾರದ ಮೇಲೆ ತಾರತಮ್ಯ ಮಾಡದೆ ಎಲ್ಲರೂ ಸಮಾನತೆಯಿಂದ ಬದುಕಬೇಕು. ಸಮಾಜದಲ್ಲಿ ಭ್ರಾತೃತ್ವದ ಭಾವನೆ ಬೆಳೆಸಿಕೊಂಡು ಪರಸ್ಪರ ಗೌರವದಿಂದ ನಡೆದುಕೊಳ್ಳುವುದು ಸಂವಿಧಾನದ ಪ್ರಮುಖ ಆಶಯವಾಗಿದೆ ಎಂದು ಹೇಳಿದರು.

ವಿಶ್ವಸಂಸ್ಥೆಗೆ ಭಾರತ ಸಂವಿಧಾನವು ಪ್ರಪಂಚದ ಅತ್ಯಂತ ಪುರಾತನ ಮತ್ತು ಸಮಾನ ಹಕ್ಕು ಅವಕಾಶಗಳನ್ನು ಕಲ್ಪಿಸುವುದು, ಕಾರ್ಮಿಕರ ಹಕ್ಕುಗಳನ್ನು

2ನೇ ಪುಟಕ್ಕೆ>>>>>

ಸರ್ಕಾರದಲ್ಲಿ ನಂಬಿಕೆಯಿಡಿ ಪ್ರತಿಭಟನೆ ಕೈ ಬಿಡಿ: ಮುಖ್ಯಮಂತ್ರಿ ಮನವಿ





ಬೆಂಗಳೂರು: ರಾಜ್ಯ ಸರ್ಕಾರ ಆಶಾ ಕಾರ್ಯಕರ್ತೆಯರ ಪರವಾಗಿದೆ. ಪ್ರತಿಪಕ್ಷ ಬಿಟ್ಟು ಪ್ರತಿಭಟನೆ ಕೈಬಿಡಿ ಎಂದು ಮನವಿ ಮಾಡಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಾಳೆ ಆಶಾ ಕಾರ್ಯಕರ್ತೆಯರ ಜೊತೆ ಸಮಸ್ಯೆ ಪರಿಹಾರಕ್ಕೆ ಮಾತುಕತೆ ನಡೆಸುವುದಾಗಿ ಹೇಳಿದರು.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇದು ಆಶಾ ಕಾರ್ಯಕರ್ತೆಯರ ವಿಚಾರ ಒಂದೇ ಅಲ್ಲ ಬೇರೆ ಬೇರೆ ವಿಚಾರಗಳಿಗೆ ಬೇರೆಯವರು ತಮ್ಮ ಬೇಡಿಕೆಗಳು ಈಡೇರಿಕೆಗಾಗಿ ಸಿದ್ಧರಾಗುತ್ತಿದ್ದಾರೆ. ಹಾಗಾಗಿ ಆಶಾ ಕಾರ್ಯಕರ್ತೆಯರು ತಾಳ್ಮೆ ತೆಗೆದುಕೊಳ್ಳಬೇಕು ಪ್ರತಿಭಟನೆ ಕೈಬಿಡಬೇಕು ಎಂದು ವಿನಮ್ರತೆಯಿಂದ ಮನವಿ ಮಾಡುವುದಾಗಿ ಹೇಳಿದರು.

ಸರ್ಕಾರವನ್ನು ಹೆದರಿಸುವ ಕೆಲಸವನ್ನು ಮಾಡಬಾರದು ಸರ್ಕಾರವನ್ನು ಹೆದರಿಸುವುದು ಸರಿಯಲ್ಲ ಎಂದರು. ನಮ್ಮ ಮೇಲೆ ನಂಬಿಕೆ ಇಡಿ ಸಮಸ್ಯೆ ಬಗೆಹರಿಸುತ್ತೇವೆ ಅದು ಬಿಟ್ಟು ಸರ್ಕಾರವನ್ನು ಹೆದರಿಸುವ ಕೆಲಸ ಮಾಡಬಾರದು. ಹಣಬೆಡ ಹೆಣ್ಣು ಎಂದರೆ ಕುಟುಂಬದ ಕಣ್ಣು ಎಂಬುದು ನಮಗೆ ಅರಿವಿದೆ ಅವರ ಸಮಸ್ಯೆ ಬಗೆಹರಿಸುತ್ತೇವೆ. ಪ್ರತಿಭಟನೆ ಕೈಬಿಡಿ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಪುನರುಚ್ಚರಿಸಿದರು.

ಇದು ಒಂದೇ ಇಲಾಖೆಗೆ ಸೇರಿದ್ದಲ್ಲ. ಇದರ ಪರಿಣಾಮ ಬಹಳ ವಿಪರೀತ ಇದೆ. ನಾನು ಹಣಕಾಸು ಅಧಿಕಾರಿಗಳೊಂದಿಗೂ ಬಾರಿ ಚರ್ಚಿಸಿದ್ದೇನೆ ತಾಳ್ಮೆವಹಿಸಿ ಎಂದು ಮುಖ್ಯಮಂತ್ರಿಗಳು ಹೇಳಿದರು.

ಜನಾವಣೆ ಪ್ರಣಾಳಿಕೆಯಲ್ಲಿ ಹೇಳಿದಂತೆ ಗ್ಯಾರಂಟಿಗಳನ್ನ ಅನುಷ್ಠಾನ ಮಾಡಿದ್ದೇವೆ ಅದೇ ರೀತಿ ಆಶಾ ಕಾರ್ಯಕರ್ತೆಯರ ಸಮಸ್ಯೆಗಳನ್ನು ಪರಿಹರಿಸುತ್ತೇವೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಮೇಲೂ ಒತ್ತಾಯ ಹೇರಬೇಕಲ್ಲವೇ ಯಾಕೆ ಅವರ ವಿರುದ್ಧ ನೀವು ಏನು ಮಾಡುತ್ತಿಲ್ಲ ಅವರು ಗೌರವ ಧನ ಏರಿಸಬಹುದಲ್ಲವೇ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು . ಸರ್ಕಾರಿಯೋಜನೆ

2ನೇ ಪುಟಕ್ಕೆ>>>>>

ಬಸವಕೇಂದ್ರ ಹೊಸಮಠದಲ್ಲಿ ಸಂವಿಧಾನ ದಿನಾಚರಣೆ

ಮೌರ್ಯವಾಣಿ ವಾರ್ತೆ

ಹಾವೇರಿ: ವಿದ್ಯಾರ್ಥಿ ಜೀವನದಲ್ಲಿ ಕಲಿಯುವ ಪಾಠಗಳು ಭವಿಷ್ಯಕ್ಕೆ ಭದ್ರ ಬುನಾದಿಯಾಗಲಿವೆ. ಮಕ್ಕಳು ಸಮಯದ ಮಹತ್ವ ಅರಿತು, ದುಶ್ಚಟಗಳಿಗೆ ದಾಸರಾಗದೆ ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಂಡು ಸೃಜನಶೀಲತೆಯನ್ನು ಸಾಧನೆಯ ಹಾದಿಯಲ್ಲಿ ಹಾಗೂ ಮುನ್ನಡೆಯಬೇಕು ಎಂದು ಹೊಸಮಠದ ಬಸವಶಾಂತಲಿಂಗ ಸ್ವಾಮೀಜಿ ಹೇಳಿದರು.

ನಗರದ ಬಸವಕೇಂದ್ರ ಹೊಸಮಠದಲ್ಲಿ ಗುರುವಾರ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ, ಮಕ್ಕಳ ದಿನಾಚರಣೆ ಹಾಗೂ ಸಂವಿಧಾನ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

"ಒಬ್ಬ ತಂದೆ ನೂರು ಸ್ಕೂಲ್ ಮೇಷ್ಟ್ರಿಗೆ ಸಮ,ಅಪ್ಪನ ಪಾಠವನ್ನು ಕಿವಿಕೊಟ್ಟು ಪಾಲಿಸಿದವ, ಎಂದಿಗೂ ವಿಫಲವಾಗ,

ಮಕ್ಕಳಿಗೆ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ಕಲಿಸುವ ಜವಾಬ್ದಾರಿ ಮನೆ, ಶಾಲೆ ಹಾಗೂ ಮಠಗಳ ಮೇಲಿದೆ. ಮಕ್ಕಳು ತಮ್ಮ ಕನಸುಗಳನ್ನು ನನಸಾಗಿಸಿಕೊಳ್ಳಲು ನಿರಂತರ ಶ್ರಮಿಸಬೇಕು. ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದಾಗ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯ. ಮಕ್ಕಳಲ್ಲಿ ಸಾಧನೆಯ ಪ್ರೇರಣೆ ಮೂಡಿಸುವ ಉದ್ದೇಶದಿಂದ ಬಾಲಪ್ರತಿಭೆ ಭೂಮಿಕಾ ಈಟೇರ ಅವರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ ಗೌರವಿಸಲಾಗಿದೆ ಎಂದರು.

ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯ ಉಳಿವಿನಲ್ಲಿ ಕನ್ನಡ ಸಂಘಟನೆಗಳೊಂದಿಗೆ ಪತ್ರಿಕೆಗಳ ಪಾತ್ರವೂ ಮಹತ್ವದ್ದಾಗಿದೆ. ಜನರ ನೋವು-ನಲಿವುಗಳಿಗೆ ಧ್ವನಿಯಾಗುವ ಜತೆಗೆ ಕನ್ನಡ ಭಾಷೆಯ ರಕ್ಷಣೆ ಹಾಗೂ ಜಾಗೃತಿಯ ಕಾರ್ಯವನ್ನು ಪತ್ರಿಕೆಗಳು ಮಾಡುತ್ತಿವೆ. ಕನ್ನಡಿಗರನ್ನು ಒಗ್ಗೂಡಿಸುವ ಕೆಲಸಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಉಪನ್ಯಾಸಕ ಶೇಖರ ಭಜಂತ್ರಿ ಮಾತನಾಡಿ, ವೈವಿಧ್ಯತೆಯಲ್ಲಿ ಏಕತೆಯನ್ನು ಹೊಂದಿರುವ ಭಾರತಕ್ಕೆ ಡಾ.ಬಿ. ಆರ್. ಅಂಬೇಡ್ಕರ್ ಅವರು ಎಲ್ಲರಿಗೂ ಸಮಾನ ಹಕ್ಕು, ಸ್ವಾತಂತ್ರ್ಯ ಮತ್ತು ಸಹಬಾಳ್ವೆಯ

2ನೇ ಪುಟಕ್ಕೆ>>>>>

ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ವಿತರಿಸಿದ ಶಾಸಕ ಮಾನೆ

ಮೌರ್ಯವಾಣಿ ವಾರ್ತೆ

ಹಾನಗಲ್: ಶಾಸಕ, ಕರ್ನಾಟಕ ಗೃಹ ಮಂಡಳ ಅಧ್ಯಕ್ಷ ಶ್ರೀನಿವಾಸ ಮಾನೆ ಅವರ ಇಲ್ಲಿನ ಜನಸಂಪರ್ಕ ಕಚೇರಿಯಲ್ಲಿ ಮಂಗಳವಾರ ನಡೆದ ಸಮಾರಂಭದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ತಾಲೂಕಿನ ಒಟ್ಟು 60 ಜನ ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ವಿತರಿಸಲಾಯಿತು.



ಹಾನಗಲ್‌ನಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ಶಾಸಕ, ಕರ್ನಾಟಕ ಗೃಹ ಮಂಡಳ ಅಧ್ಯಕ್ಷ ಶ್ರೀನಿವಾಸ ಮಾನೆ ಹೊಲಿಗೆ ಯಂತ್ರ ವಿತರಿಸಿದರು. ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಅಧ್ಯಕ್ಷ ಮರಿಯೋಜಿರಾವ್ ಇದ್ದರು.

ಈ ಸಂದರ್ಭದಲ್ಲಿ ಶ್ರೀನಿವಾಸ ಮಾನೆ ಮಾತನಾಡಿ, ಬಡತನೇತ ಎಲ್ಲ ನಿಗಮಗಳಿಗೂ ಕನಿಷ್ಠ 10–12 ವರ್ಷಗಳ ಇತಿಹಾಸವಿದ್ದರೆ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ಕೇವಲ 3 ವರ್ಷಗಳ ಇತಿಹಾಸವಿದೆ. ಹಾಗಾಗಿ ಪ್ರಜಾಸೇವಕ ಮುಖ್ಯಮಂತ್ರಿಗಳ ಮನವೊಲಿಸಿ ನಿಗಮಕ್ಕೆ ಹೆಚ್ಚು ಅನುದಾನ ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಕಾಳಜಿ ವಹಿಸಲಾಗುವುದು. ನಿಗಮದಿಂದ ಹತ್ತು, ಹಲವು ಯೋಜನೆ, ಕಾರ್ಯಕ್ರಮ ರೂಪಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿರುವುದು ಸಂತಸದ ಸಂಗತಿ ಎಂದರು.

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ

2ನೇ ಪುಟಕ್ಕೆ>>>>>

ವಸತಿ ನಿಲಯಕ್ಕೆ ಮೂಲಭೂತ ಸೌಕರ್ಯಗಳ ವಿತರಣೆ: ಎಸ್‌ಎಫ್‌ಐ ನೇತೃತ್ವದಲ್ಲಿ ಹಾಸ್ಟೆಲ್ ವಿದ್ಯಾರ್ಥಿನಿಯರು ಹೋರಾಟಕ್ಕೆ ಸಂದ ಜಯ



ಮೌರ್ಯವಾಣಿ ವಾರ್ತೆ

ಹಾವೇರಿ: ತಾಲೂಕಿನ ಕೆರಿಮತ್ತಿಹಳ್ಳಿ ಹಾವೇರಿ ವಿಶ್ವವಿದ್ಯಾಲಯದ ಕ್ಯಾಂಪಸ್ ನಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಯರ ವಸತಿ ನಿಲಯ ಕ್ಕೆ ಇತ್ತೀಚೆಗೆ ಆಪರಿಚಿತ ವ್ಯಕ್ತಿಯೋರ್ವ ಅನುಚಿತ ವರ್ತನೆ ತೋರಿದ ಘಟನೆಯಿಂದ ಭಯ ಬೀತರಾದ ವಿದ್ಯಾರ್ಥಿನಿಯರು ಭಾರತ ವಿದ್ಯಾರ್ಥಿ ಫೆಡರೇಶನ್ (ಎಸ್ ಎಫ್ಐ) ನೇತೃತ್ವದಲ್ಲಿ ಹಾಸ್ಟೆಲ್ ಎದುರು ಧರಣಿ ನಡೆಸಿ ಕಿಡಿಗೇಡಿ ಆರೋಪಿಯನ್ನು ಬಂಧನಕ್ಕಾಗಿ, ಸೂಕ್ತ ರಕ್ಷಣೆಗಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಒತ್ತಡ ಹಾಕಲಾ ಗಿತ್ತು.

ವಿದ್ಯಾರ್ಥಿನಿಯರು ಹೋರಾಟದ ಒತ್ತಡಕ್ಕೆ ಸ್ಪಂಧಿಸಿ ಧರಣಿ ಸ್ಥಳಕ್ಕೆ ಧಾವಿಸಿ ಪ್ರೋಲಿಸ್ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿ ಎಫ್‌ಐಆರ್ ದಾಖಲಿಸಿದರು. ಬೀಟ್ ಪೋಲಿಸ್ ಸಿಬ್ಬಂದಿಗಳನ್ನು ನೇಮಕ ಮಾಡಲಾಗುತ್ತದೆ. ಸೂಕ್ತ ರಕ್ಷಣೆಯನ್ನು ಒದಗಿಸುತ್ತೇವೆ ಭರವಸೆ ನೀಡಿದರು. ಬಿಸಿಸಿ ಎಮ್ ಇಲಾಖೆಯ ಅಧಿಕಾರಿಗ ಳು ಮೂಲಭೂತ ಸೌಕರ್ಯ ಗಳನ್ನು ಒದಗಿಸುವದಾಗಿ ಭರವಸೆ ನೀಡಿದರು.

ಮೂಲಭೂತ ಸೌಕ ರ್ಯಗಳ ವಂಚನೆ ಕುರಿತು ಮಾಧ್ಯಮಗಳಲ್ಲಿ ವಿಶೇಷ ವರದಿಗಳು ಬಂದಿದ್ದು, ಎಚ್ಚೆತ್ತ ಅಧಿಕಾರಿಗಳು ವಸತಿ ನಿಲಯಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿದ್ದಾರೆ. ಮೆಟ್ರಿಕ್ ನಂತರ ಮಹಿಳಾ ವಸತಿ ನಿಲಯ ಕೆರಿಮತ್ತಿಹಳ್ಳಿ ಇಲ್ಲಿಗೆ ಮೂಲಭೂತ ಸೌಲಭ್ಯ ಒದಗಿ ಸಲು ವಿದ್ಯಾರ್ಥಿಗಳ ಬೇಡಿಕೆಯ ಂತೆ ಮೂಲಭೂತ ಸೌಲಭ್ಯಗ ಳನ್ನು ಒದಗಿಸಲಾಗಿ ರುತ್ತದೆ ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿನಿಲಯಕ್ಕೆ 12ಕ್ಕೂ ಹೆಚ್ಚು ಸಿ ಸಿ ಕ್ಯಾಮೆರಾ ಅಳವಡಿಸಲಾಗಿದೆ. ಎಲ್ಲಾ ಕಟ್ಟಡಗ ಳಿಗೆ ಕರ್ಟನ್ ಅಳವಡಿಸಲಾಗಿದೆ. ಸಂಖ್ಯಾಬಲಕ್ಕೆ ಅನುಕೂಲ ವಾಗುವಂತೆ 1000 ಲೀಟರ್ ಸಾಮರ್ಥ್ಯದ ವಾಟರ್ ಫಿಲ್ಟರ್ ಪೂರೈಸಿದೆ. ಕಟ್ಟಡದ ಹಿಂಭಾಗದಲ್ಲಿ ಇನ್ನೂ ಹೆಚ್ಚಿನ ಬೆಳಕು ಬೀಳುವಂತೆ ಲೈಟಿನ ವ್ಯವಸ್ಥೆ ಮಾಡಲಾಗಿದೆ. ಅವಶ್ಯಕತೆ ಇರುವ ವಿದ್ಯಾರ್ಥಿಗಳಿಗೆ ಬಕೆಟ್ ಮತ್ತು ಜಗ್‌ಗಳನ್ನು ವಿತರಿಸಿದೆ. ಹೆಚ್ಚುವರಿ ಯಾಗಿ 25 ಕಾಟ್ ಮತ್ತು 55 ಬೆಡ್‌ಗಳು ಇಲಾಖೆಯಿಂದ ಮಂ ಜೂರಾಗಿರುತ್ತವೆ. ವಿದ್ಯಾರ್ಥಿಗಳ ಕೊಠಡಿಗೆ ಹೆಚ್ಚುವರಿಯಾಗಿ ಕನ್ನಡಿಗಳನ್ನು ಅಳವಡಿಸಿದೆ. ದುರಸ್ತಿ ಇರುವ ವಿದ್ಯುತ್, ಪ್ಲಂಬಿಂಗ್, ಮತ್ತು ಜಾಗಿಲುಗ ಳನ್ನು ರಿಪೇರಿಗೊಳಿಸಲಾಗಿದೆ. ಪ್ರತಿದಿನ ಸಮಯಕ್ಕೆ ಸರಿಯಾಗಿ ರುಚಿ ಊಟ ನೀಡಲಾಗುತ್ತಿದೆ. ಹೈಮಾಸ್ಕ್ ಲೈಟ್, ರಸ್ಟ್-ಪ್ರೂಫಿಂಗ್ ಟೇಬಲ್ ಪೂರೈಕೆ ಮಾಡಲು ಸೇರಿದಂತೆ ಇನ್ನೂ ಇತರ ಸೌಲಭ್ಯಗಳಾಗಿ ಮೇಲಾಧಿ ಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ